# ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 330 ರ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಕುರಿತು.

ಪ್ರಶ್ನೆ:

ಸಮಾಜ ಕಲ್ಯಾಣ ಇಲಾಖೆಯಡಿಯ ಕ್ರೈಸ್ ವತಿಯಿಂದ ನಡೆಸುತ್ತಿರುವ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಶಿಕ್ಷಕರಿಗೆ ಡಿ.ಸಿ.ಆರ್.ಜಿ, ಕೆ.ಜಿ.ಐ.ಡಿ, ಜ್ಯೋತಿ ಸಂಜೀವಿನಿ, ಆರೋಗ್ಯ ಸಿರಿ ಸೌಲಭ್ಯ ವಿಸ್ತರಣೆ, ವಸತಿ ಶಿಕ್ಷಣ ನಿರ್ದೇಶನಾಲಯ ರಚನೆ, ಕಿತ್ತೂರು ರಾಣಿ ಚೆನ್ನಮ್ಮ ಶಾಲೆಗಳನ್ನು ಮೇಲ್ದರ್ಜೆಗೇರಿಸುವುದು, ಸಕಾಲದಲ್ಲಿ ಪಠ್ಯಪುಸ್ತಕ, ತರಬೇತಿ ಮತ್ತು ಪಾಠೋಪರಣಗಳನ್ನು ಒದಗಿಸುವುದು, ಹಿಂದಿ ಉಪನ್ಯಾಸಕರ, ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆ ಸೃಜನೆ, ವಸತಿ ಶಾಲೆಗಳಲ್ಲೇ ವಾಸವಿರುವ ಖಾಯಂ ಶಿಕ್ಷಕರಿಗೆ ಶೇ 10% ರಷ್ಟು ವಿಶೇಷ ಭತ್ಯೆ ನೀಡದೇ ಇರುವುದು, ಎನ್.ಪಿ.ಎಸ್ ಯೋಜನೆಯಡಿಯ ಶಿಕ್ಷಕರಿಗೆ ಸರ್ಕಾರ ನೀಡಬೇಕಾದ ಪಾಲಿನ ಹಣವನ್ನು ಸಮಾನಾಂತರವಾಗಿ ಪಾವತಿಸದೆ ಇರುವುದು, ಟಿ.ಇ.ಟಿ ಪಾಸಗದೆ ಇರುವ ಶಿಕ್ಷಕರಿಗೆ ತರಬೇತಿ ಮತ್ತು ಪರೀಕ್ಷಾ ವೆಚ್ಚಕ್ಕಾಗಿ ರೂ.20,153/- ಗಳನ್ನು ಸಂದಾಯ ಮಾಡಲು ಆದೇಶಿಸಿರುವುದು. ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳಲ್ಲಿ ಸ್ನಾತಕೋತ್ತರ ಪದವೀದರ ಹುದ್ದೆಗಳನ್ನು ಸೃಜಸದೇ ಇರುವುದು ಹಾಗೂ ವಸತಿ ಶಾಲೆಗಳ ಉನ್ನತೀಕರಣ ಮಾಡದೆ ಇರುವುದರಿಂದ ಉಂಟಾದ ಗಂಭೀರ ಸಮಸ್ಯೆ ಕುರಿತು ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

ಉತ್ತರ:

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ 830 ವಸತಿ ಶಾಲೆ / ಕಾಲೇಜುಗಳು (ಪರಿಶಿಷ್ಟ ಜಾತಿ-503, ಪರಿಶಿಷ್ಟ ವರ್ಗ-156, ಹಿಂದುಳಿದ ವರ್ಗ-171) ಕಾರ್ಯನಿರ್ವಹಿಸುತ್ತಿವೆ.

ಸದರಿ ವಸತಿ ಶಾಲೆಗಳ ಖಾಯಂ ಸಿಬ್ಬಂದಿಗಳಿಗೆ ಸಂಬಂಧಿಸಿದ ಸೇವಾ ಸೌಲಭ್ಯಗಳ ವಿವರ ಈ ಕೆಳಕಂಡಂತಿದೆ.

**ಡಿ.ಸಿ.ಆರ್.ಜಿ**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಡಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರಿಗೆ ದಿನಾಂಕ:01.04.2018 ರಿಂದ (DCRG) ಕುಂಟುಂಬ ಪಿಂಚಣಿ ಯೋಜನೆಯ ಸೌಲಭ್ಯವನ್ನು ವಿಸ್ತರಿಸಲು ನೂತನ ಪಿಂಚಣಿ ಯೋಜನೆಯಡಿ ಬರುವ ಸರ್ಕಾರಿ ನೌಕರರಿಗೆ ಮಾತ್ರ ಎಂದು ಸ್ಪಷ್ಟವಾಗಿ ತಿಳಿಸಿರುವುದಿರಂದ ಈ ಸೌಲಭ್ಯವು ಸರ್ಕಾರದ ನಿಗಮ ಮಂಡಳಿಗಳು, ಸ್ವಾಯತ್ತ ಸಂಸ್ಥೆಗಳು ಹಾಗೂ ಸರ್ಕಾರದ ಅಧೀನದ ಇನ್ನಿತರ ಯಾವುದೇ ಸಂಘ ಸಂಸ್ಥೆಗಳ ನೌಕರರಿಗೆ ಅನ್ವಯಿಸುವುದಿಲ್ಲ ಆದ್ದರಿಂದ ಸಂಘದ ನೌಕರರಿಗೆ ಈ ಸೌಲಭ್ಯವನ್ನು ವಿಸ್ತರಿಸಲು ಸಾಧ್ಯವಿರುವುದಿಲ್ಲ.

ಆದಾಗ್ಯೂ ಸಂಘದ ವಸತಿ ಶಾಲೆಯ ಶಿಕ್ಷಕರಿಗೆ ಇತರೆ ಎಲ್ಲಾ ಸರ್ಕಾರಿ ನೌಕರರುಗಳಿಗೆ ಅನ್ವಯವಾಗುವಂತೆ, ದಿನಾಂಕ:01.04.2018 ರಿಂದ DCRG ಕುಟುಂಬ ಪಿಂಚಣಿ ಯೋಜನೆಯ ಸೌಲಭ್ಯವನ್ನು ವಿಸ್ತರಿಸುವ ಪ್ರಸ್ತಾವನೆಯು ಆರ್ಥಿಕ ಇಲಾಖೆಯಲ್ಲಿ ಪರಿಶೀಲನೆಯಲ್ಲಿರುತ್ತದೆ.

**ಕೆ.ಜಿ.ಐ.ಡಿ.**

ರಾಜ್ಯ ಸರ್ಕಾರಿ ನೌಕರರಿಗೆ ನೀಡಲಾಗುವ ಕೆ.ಜಿ.ಐ.ಡಿ. ಸೌಲಭ್ಯವನ್ನು ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳ ನೌಕರರಿಗೆ ಖಾಯಂ ರಾಜ್ಯ ಸರ್ಕಾರಿ ನೌಕರರಿಗಾಗಿ ರೂಪಿಸಲಾಗಿರುವ ಕಡ್ಡಾಯ ಜೀವ ವಿಮಾ ನಿಯಮಗಳ ವ್ಯಾಪ್ತಿಗೆ ಒಳಪಡಿಸಲು ಅವಕಾಶವಿರುವುದಿಲ್ಲವೆಂದು ಆರ್ಥಿಕ ಇಲಾಖೆಯು ತಿಳಿಸಿರುತ್ತದೆ.

**ಜ್ಯೋತಿ ಸಂಜೀವಿನಿ**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆ/ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಖಾಯಂ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ಜ್ಯೋತಿ ಸಂಜೀವಿನಿ ಯೋಜನೆ ಹಾಗೂ ನಗದು ರಹಿತ ಸೌಲಭ್ಯಗಳನ್ನು ನೀಡುವ ಸಂಬಂಧ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ರವರಿಗೆ ಕೋರಲಾಗಿ, ಸದರಿ ಟ್ರಸ್ಟ್ ರವರು ದಿನಾಂಕ: 29.06.2021 ರಂದು ಸಭೆ ಸೇರಿ ಸಂಘದ ಖಾಯಂ ನೌಕರರು ಹಾಗೂ ಅವಲಂಬಿತ ಕುಟುಂಬದ ಸದಸ್ಯರುಗಳಿಗೆ ನಗದು ರಹಿತ ವೈದ್ಯಕೀಯ ಚಿಕಿತ್ಸೆ ಒದಗಿಸಲು ತಾತ್ವಿಕ ಒಪ್ಪಿಗೆ ನೀಡಿರುತ್ತಾರೆ. ಈ ಸಂಬಂಧ ಸದರಿ ಟ್ರಸ್ಟ್ ರವರು ನಗದು ರಹಿತ ವೈದ್ಯಕೀಯ ಸೌಲಭ್ಯ ನೀಡಲು ಹೆಚ್.ಆರ್.ಎಂ.ಎಸ್ ತಂತ್ರಾಂಶದಲ್ಲಿ ಸಂಘದಿಂದ ನೌಕರರ ಮತ್ತು ಅವಲಂಬಿತರ ಸಂಬಂಧಿಸಿದ ಮಾಹಿತಿಯನ್ನು ನಮೂದಿಸಲು ಉಂಟಾಗಿದ್ದ ತಾಂತ್ರಿಕ ದೋಷವನ್ನು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಮತ್ತು ಹೆಚ್.ಆರ್.ಎಂ.ಎಸ್ ಸೆಲ್ ಅಧಿಕಾರಿಗಳ ಸಹಯೋಗದೊಂದಿಗೆ ತಾಂತ್ರಿಕ ದೋಷವನ್ನು ಪರಿಹರಿಸಲು ಕ್ರಮವಹಿಸಲಾಗುತ್ತಿದ್ದು, ಪ್ರಸ್ತುತ ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ.

**ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವನ್ನು ನಿರ್ದೇಶನಾಲಯವನ್ನಾಗಿ ರಚಿಸುವ ಕುರಿತು.**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವನ್ನು ನಿರ್ದೇಶನಾಲಯವನ್ನಾಗಿ ಮಾಡುವ ಕುರಿತು. ಈಗಾಗಲೇ ಸಂಘದ ಆಡಳಿತ ಮಂಡಳಿ ಸಭೆಯಲ್ಲಿ ಚರ್ಚಿಸಲಾಗಿದ್ದು, ಪರಿಶೀಲಿಸಲಾಗುವುದು.

**ಕಿತ್ತೂರು ರಾಣಿ ಚೆನ್ನಮ್ಮ ಶಾಲೆಗಳನ್ನು ಮೇಲ್ದರ್ಜೆಗೇರಿಸುವುದು.**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ 113 ಕಿತ್ತೂರು ರಾಣಿಚೆನ್ನಮ್ಮ ವಸತಿ ಶಾಲೆಗಳನ್ನು 11 ಮತ್ತು 12 ನೇ ತರಗತಿಗಳಿಗೆ ಉನ್ನತೀಕರಿಸುವ ಸಂಬಂಧ ಸಲ್ಲಿಸಲಾಗಿದ್ದ ಪ್ರಸ್ತಾವನೆಯನ್ನು ಪರಿಶೀಲಿಸಿ ಆರ್ಥಿಕ ಇಲಾಖೆಯು ರಾಜ್ಯದ ಆರ್ಥಿಕ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಪ್ರಸ್ತಾವನೆಯನ್ನು ಸದ್ಯಕ್ಕೆ ಮುಂದೂಡುವಂತೆ ನಿರ್ದೇಶಿಸಿರುತ್ತದೆ.

**ಹಿಂದಿ ಉಪನ್ಯಾಸಕರ ಹುದ್ದೆ ಸೃಜನೆ**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ 26 ವಿಜ್ಞಾನ ಪದವಿ ಪೂರ್ವ ಕಾಲೇಜುಗಳು, 15 ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳು, 12 ಏಕಲವ್ಯ ವಸತಿ ಶಾಲೆಗಳು, 31 ಉನ್ನತೀಕರಿಸಿದ ವಸತಿ ಶಾಲೆಗಳು ಕಾರ್ಯನಿರ್ವಹಿಸುತ್ತಿದ್ದು, ವಿಜ್ಞಾನ ಕಾಲೇಜುಗಳಲ್ಲಿ ಭಾಷಾ ವಿಷಯಗಳು ಕನ್ನಡ ಮತ್ತು ಇಂಗ್ಲೀಷ್ ಆಗಿರುವುದರಿಂದ ಹಿಂದಿ ಭಾಷೆಯನ್ನು ಪರಿಗಣಿಸಿರುವುದಿಲ್ಲವಾದ್ದರಿಂದ ಹಿಂದಿ ಉಪನ್ಯಾಸಕರ ಹುದ್ದೆ ಮಂಜೂರಾಗಿರುವುದಿಲ್ಲ.

**ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆ ಸೃಜನೆ.**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದ 804 ವಸತಿ ಶಾಲೆಗಳಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆ ಮಂಜೂರಾಗಿರುತ್ತದೆ. ಸದರಿ ಹುದ್ದೆಗಳ ಪೈಕಿ 570 ಖಾಯಂ ದೈಹಿಕ ಶಿಕ್ಷಣ ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದಾರೆ.

**ಖಾಯಂ ಶಿಕ್ಷಕರಿಗೆ ಶೇ 10 ರಷ್ಟು ವಿಶೇಷ ಭತ್ಯೆ**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳ ಖಾಯಂ ಸಿಬ್ಬಂದಿಗಳಿಗೆ ಮೂಲ ವೇತನದ ಶೇ 10% ಶಾಲಾ ಕ್ಯಾಂಪಸ್ ವಿಶೇಷ ಭತ್ಯೆಯನ್ನು ಮಂಜೂರು ಮಾಡುವ ಕುರಿತು ಆರ್ಥಿಕ ಇಲಾಖೆಯು 6ನೇ ರಾಜ್ಯ ವೇತನ ಆಯೋಗವು ತನ್ನ ವರದಿಯಲ್ಲಿ ಈ ರೀತಿಯ ಭತ್ಯೆಗೆ ಯಾವುದೇ ಶಿಫಾರಸ್ಸು ಮಾಡಿರುವುದಿಲ್ಲವಾದ್ದರಿಂದ ಈ ಕ್ಯಾಂಪಸ್ ವಿಶೇಷ ಭತ್ಯೆ ಕೋರಿಕೆಯನ್ನು ಒಪ್ಪಲು ಸಾಧ್ಯವಿಲ್ಲವೆಂದು ತಿಳಿಸಿದೆ. ಈ ಹಿನ್ನಲೆಯಲ್ಲಿ ಸದರಿ ವಿಶೇಷ ಭತ್ಯೆಯನ್ನು ಮಂಜೂರು ಮಾಡಲು 7 ನೇ ವೇತನ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲು ಕ್ರಮವಹಿಸಲಾಗುತ್ತಿದೆ.

**ಎನ್.ಪಿ.ಎಸ್**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆ/ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಸಿಬ್ಬಂದಿಗಳಿಗೆ ದಿನಾಂಕ 01.04.2019 ರಿಂದ ಜಾರಿಗೆ ಬರುವಂತೆ ಸರ್ಕಾರದ ವಂತಿಗೆಯನ್ನು ಶೇ 10 ರಿಂದ ಶೇ 14 ಕ್ಕೆ ಹೆಚ್ಚಿಸಿ, ಸಂಘದ ಖಾಯಂ ಸಿಬ್ಬಂದಿಗಳಿಗೆ ಶೇ 14 ರಷ್ಟು ಸರ್ಕಾರದ ವಂತಿಗೆಯನ್ನು ಸಂಘದ ನೌಕರರ ವಂತಿಗೆಯ ವ್ಯತ್ಯಾಸದ ಮೊತ್ತವನ್ನು ಪಾವತಿಸಲಾಗಿದೆ.

**ಕೃಪಾಂಕದ ಮೂಲಕ ನೇಮಕವಾದ ಶಿಕ್ಷಕರಿಗೆ ಟಿ.ಇ.ಟಿ ತರಬೇತಿ ಮತ್ತು ಪರೀಕ್ಷೆ ಆಯೋಜಿಸುವ ಬಗ್ಗೆ.**

ಮಾನ್ಯ ನ್ಯಾಯಾಲಯದ ಆದೇಶದಂತೆ 2011 ರ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಪಡೆದ ಅಂಕಗಳು ಹಾಗೂ ಸೇವಾ ಕೃಪಾಂಕದ ಮೂಲಕ ಸಂಘದ ವಸತಿ ಶಾಲೆಗಳಿಗೆ ನೇಮಕ ವಾಗಿರುವ ಶಿಕ್ಷಕರಿಗೆ ವಸತಿ ಶಾಲೆಗಳ ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟದ ಹಿನ್ನಲೆಯಲ್ಲಿ ಟಿ.ಇ.ಟಿ ಪರೀಕ್ಷೆಯನ್ನು ಉತ್ತೀರ್ಣಗೊಳ್ಳುವ ಷರತ್ತಿಗೊಳಪಟ್ಟು ನೇಮಕಾತಿ ಆದೇಶವನ್ನು ಹೊರಡಿಸಲಾಗಿರುತ್ತದೆ. ಟಿ.ಇ.ಟಿ ಪರೀಕ್ಷೆಯನ್ನು ಪೂರ್ಣಗೊಳಿಸಿದ ಶಿಕ್ಷಕರಿಗೆ ಖಾಯಂ ಪೂರ್ವಾವಧಿಯನ್ನು ಘೋಷಿಸಿದ್ದು, ಟಿ.ಇ.ಟಿ ಪರೀಕ್ಷೆಯನ್ನು ಪೂರ್ಣಗೊಳಿಸದೇ ಇರುವ ಶಿಕ್ಷಕರಿಗೆ ತರಬೇತಿಯೊಂದಿಗೆ ಪರೀಕ್ಷೆಯನ್ನು ನಡೆಸಲು ಸಂಘದಿಂದ ಕ್ರಮವಹಿಸಲಾಗಿದ್ದು, ಸದರಿ ಪರೀಕ್ಷಾ ವೆಚ್ಚವನ್ನು ಸಂಘದ ವತಿಯಿಂದ ಭರಿಸಲಾಗುವುದು.

**ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳಲ್ಲಿ ಸ್ನಾತಕೋತ್ತರ ಪದವೀದರ ಹುದ್ದೆಗಳನ್ನು ಸೃಜಸದೇ ಇರುವುದು**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ 2012-13 ನೇ ಸಾಲಿನಲ್ಲಿ ಮಂಜೂರಾಗಿರುವ ಪ್ರತಿ ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳಿಗೆ 18 ಸ್ನಾತಕೋತ್ತರ ಪದವೀಧರ ಶಿಕ್ಷಕರ ಹುದ್ದೆಗಳನ್ನು [ಕನ್ನಡ-2, ಆಂಗ್ಲಭಾಷೆ-2, ಹಿಂದಿ-2, ಗಣಿತ-2, ಭೌತಶಾಸ್ತ್ರ-2, ರಸಾಯನಶಾಸ್ತ್ರ-2, ಸಮಾಜ ವಿಜ್ಞಾನ-2, ಗಣಕ ವಿಜ್ಞಾನ-2, ದೈಹಿಕ ಶಿಕ್ಷಣ-2]. ರೂ 33450-62600 ವೇತನ ಶ್ರೇಣಿ ನಿಗಧಿಪಡಿಸಿ ಮಂಜೂರು ಮಾಡಲಾಗಿರುತ್ತದೆ.

**ವಸತಿ ಶಾಲೆಗಳ ಉನ್ನತೀಕರಣ**

2023-24 ನೇ ಸಾಲಿನಲ್ಲಿ ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳನ್ನು 11 ಮತ್ತು 12 ನೇ ತರಗತಿಯ ವರೆಗೆ ಉನ್ನತೀಕರಿಸಲು ಕ್ರಮವಹಿಸಲಾಗುವುದು.

ಮುಂದುವರೆದು, ಸಂಘದ ವ್ಯಾಪ್ತಿಯ ಖಾಯಂ ನೌಕರರುಗಳಿಗೆ ಇತರೆ ಸರ್ಕಾರಿ ನೌಕರರುಗಳಿಗೆ ನೀಡುತ್ತಿರುವಂತೆ ವೈದ್ಯಕೀಯ ವೆಚ್ಚ ಮರುಪಾವತಿ, ಕಾಲಕಾಲಕ್ಕೆ ಸರ್ಕಾರದಿಂದ ನಿಗಧಿಪಡಿಸಿದ ವೇತನ ಶ್ರೇಣಿಯಂತೆ ವೇತನ ಬಡ್ತಿ ಹಾಗೂ ವೇತನ ಶ್ರೇಣಿ, ಗಳಿಕೆ ರಜೆ ನಗದೀಕರಣ ಸೌಲಭ್ಯ, ಮೃತಪಟ್ಟ ಖಾಯಂ ನೌಕರರ ಕುಟುಂಬದ ಸದ್ಯಸ್ಯರಿಗೆ ಅನುಕಂಪ ಆಧಾರದ ಮೇಲೆ ನಿಯಮಾನುಸಾರ ನೌಕರಿ ಹಾಗೂ ಇತ್ಯಾದಿ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿರುತ್ತದೆ.

**ಸಕಇ 453 ಎಂಡಿಎಸ್ 2022**

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಹಾಗೂ ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು